**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ:575/2023**

**ಪಿ.ಡಬ್ಲ್ಯೂ-3**
**ಸಿ.ಡಬ್ಲ್ಯೂ-8**

**ಸಾಕ್ಷಿಗೆ ದಿನಾಂಕ 20-9-2024 ರಂದು ಪ್ರಮಾಣ ವಚನ ಬೋಧಿಸಲಾಯಿತು.**

ಸಾಕ್ಷಿಯ ಹೆಸರು : ದಾಸಪ್ಪ

ತಂದೆಯ ಹೆಸರು : ಓಬಣ್ಣ

ವಯಸ್ಸು : 42 ವರ್ಷ

ಉದ್ಯೋಗ : ವ್ಯವಸಾಯ

ವಾಸಸ್ಥಳ : ಲಕ್ಕಿಹಳ್ಳಿ

**ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ**

ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಯ ಪರಿಚಯ ಇರುವುದಿಲ್ಲ. ಚಾಸಾ-7 ಮತ್ತು 9 ರವರ ಪರಿಚಯ ಇರುವುದಿಲ್ಲ.

**ಸಾಕ್ಷಿಯು ಕೃತ್ಯ ಸ್ಥಳ ಪರಿಶೀಲನಾ ಪಂಚನಾಮೆ ಮತ್ತು ನಕಾಶೆಯನ್ನು ಹಾಗೂ ಅವುಗಳ ಮೇಲೆ ಇರುವ ಸಹಿಗಳನ್ನು ನೋಡಿ ಗುರುತಿಸಿದ್ದು, ಸದರಿ ದಾಖಲಾತಿಗಳನ್ನು ಈಗಾಗಲೇ ನಿಪಿ-2 ಮತ್ತು 3 ಎಂದು ಕ್ರಮವಾಗಿ ಗುರುತಿಸಿದ್ದು ಹಾಗೂ ಸಾಕ್ಷಿಯ ಸಹಿಗಳನ್ನು ನಿಪಿ-2(ಬಿ) ಮತ್ತು ನಿಪಿ-03(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಫೋಟೋವನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದೆ.** ನಿಪಿ-2 ಮತ್ತು 3 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ಅವುಗಳಿಗೆ ಸಹಿಯನ್ನು ಸುಮಾರು 2 ವರ್ಷಗಳ ಹಿಂದೆ ಮಾಡಿರುತ್ತೇನೆ. ನಿಪಿ-4 ರ ಫೋಟೋವನ್ನು ಯಾವ ಉದ್ದೇಶಕ್ಕಾಗಿ ತೆಗೆಯಲಾಯಿತು ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯ ವಾಹನ ಪರಿಶೀಲನಾ ಪಂಚನಾಮೆಯನ್ನು ನೋಡಿ ಗುರುತಿಸಿದ್ದು **ಪಂಚನಾಮೆಯನ್ನು ನಿಪಿ-5 ಎಂದು ಈಗಾಗಲೇ ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು.** ನಿಪಿ-5 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೊಲೀಸರು ನನ್ನಸಮಕ್ಷಮ ಯಾವುದೇ ಸ್ಥಳ ಪಂಚನಾಮೆ ಮಾಡಿರುವುದಿಲ್ಲ ಮತ್ತು ವಾಹನ ಪರಶೀಲನಾ ಪಂಚನಾಮೆ ಮಾಡಿರುವುದಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ದಿನಾಂಕ 11-10-2022 ರಂದು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂಭವಿಸಿದ ಅಪಘಾತಕ್ಕೆ ಸಂಬಂಧಿಸಿದಂತೆ ದಿನಾಂಕ 14-10-2022 ರಂದು ಚಾಸಾ-14 ರವರು ಕೃತ್ಯ ಸ್ಥಳಕ್ಕೆ ಬಂದಿದ್ದು ನಾನು ತೋರಿಸಿದ ಸ್ಥಳದಲ್ಲಿ ಚಾಸಾ-7 ಮತ್ತು 9 ರವರ ಸಮಕ್ಷಮ ಸಂಜೆ 4 ಗಂಟೆಯಿಂದ 4-45 ಗಂಟೆವರೆಗೆ ನಿಪಿ-2 ರಂತೆ ಸ್ಥಳ ಪಂಚನಾಮೆ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ಸ್ಥಳದಲ್ಲಿ ಹಾಜರಿದ್ದು ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-3 ರಂತೆ ಕೃತ್ಯಸ್ಥಳ ನಕಾಶೆ ತಯಾರಿಸಿದ್ದು ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಕೃತ್ಯ ಸ್ಥಳದಲ್ಲಿ ನಿಪಿ-4 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ದಿನ ಚಾಸಾ-14 ರವರು ಹೊಸದುರ್ಗ ಪೊಲೀಸ್ ಠಾಣಾ ಕಾಂಪೌಂಡು ಆವರಣದಲ್ಲಿ ನಿಲ್ಲಿಸಿದ್ದ ಅಪಘಾತಕ್ಕೆ ಒಳಗಾದ ವಾಹನ ಪರಿಶೀಲನಾ ಪಂಚನಾಮೆಯನ್ನು ನಿಪಿ-5 ರಂತೆ ಸಂಜೆ 5-30 ರಿಂದ 6-15 ರವರೆಗೆ ನನ್ನ ಮತ್ತು ಚಾಸಾ-7 ಮತ್ತು 9 ರವರ ಸಮಕ್ಷಮದಲ್ಲಿ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ನಿಪಿ-5 ಕ್ಕೆ ಸ್ಥಳದಲ್ಲಿ ಹಾಜರಿದ್ದು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ನಾನು ನಿಪಿ2 ರಂತೆ ಮಹಜರ್ ಕಾಲದಲ್ಲಿ ಹಾಜರಿದ್ದು, ನಿಪಿ-5 ರಂತೆ ವಾಹನ ಪರಿಶೀಲನಾ ಪಂಚನಾಮೆ ಸಮಯದಲ್ಲಿ ಹಾಜರಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು_ಸುಳ್ಳು ಸಾಕ್ಷ್ಯ ನುಡಿಯುತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ಡಿ ಜಿ ವಕೀಲರಿಂದಃ</u>**

ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ಸಲ್ಲಿಸುತ್ತಾರೆ._

**<u>ಮರು ವಿಚಾರಣೆ : ಇಲ್ಲ</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೆ.ಸರಿ ಅದೆ.**

**(ಪ್ರಸನ್ನಕುಮಾರ್ ಸಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ**
**ಪ್ರ.ದ.ನ್ಯಾ.ದಂಡಾಧಿಕಾರಿಗಳು,**
**ಹೊಸದುರ್ಗ.**

**CC. No.1405/2022**

Case called out. Accused Present.

CW-1 is present and examined him as PW-1, documents marked at Ex.P1 to P5. On submission made by learned APP and on consent given by Sri.GB Advocate for accused, Inquest,IMV report, PM report, etc., are marked as Ex.P6 to 8 respectively. As such in order to avoid repetition of the evidence on submission made by learned APP CW-2,3,5,6 and 8,10 to 14 are given up.

Issue w/summons to CW-4,7 and 8.

**Call on 31-8-2024.**

**Prl. Civil Judge and JMFC.,**
**Hosadurga.**